# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1096 (1212)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಮಸಾಲ ಪಾರ್ಕ್ ಸ್ಥಾಪಿಸುವ ಕುರಿತು

(ಅ) ವಿಶ್ವಪ್ರಸಿದ್ಧ ಬ್ಯಾಡಗಿ ಮೆಣಸಿನಕಾಯಿಯಿಂದ ಮೆಣಸಿನ ಪುಡಿ ಸೇರಿದಂತೆ ವಿವಿಧ ಬಗೆಯ ಉತ್ಪನ್ನಗಳನ್ನು ತಯಾರಿಸುವ ಮಸಾಲೆ ಪಾರ್ಕ್ ಒಂದನ್ನು ಬ್ಯಾಡಗಿ ಅಥವಾ ಹಾವೇರಿಯಲ್ಲಿ ಸ್ಥಾಪಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

(ಆ) ಬ್ಯಾಡಗಿ ಮೆಣಸಿನಕಾಯಿಗೆ ಹೆಚ್ಚು ಬೇಡಿಕೆ ಇದ್ದು, ಖರೀದಿದಾರರು ಮೆಣಸಿನ ಕಾಯಿಯನ್ನು ಖರೀದಿಸಿದ ನಂತರ ಇಲ್ಲಿಯೇ ಪುಡಿ ಮಾಡಿಸಿಕೊಳ್ಳಲು ಅನುಕೂಲವಾಗುವಂತೆ ಮೆಣಸಿನಕಾಯಿ ಪುಡಿ ಮಾಡುವ (ಸುಮಾರು 100) ಘಟಕಗಳು ಬ್ಯಾಡಗಿಯಲ್ಲಿದ್ದು, ಇವುಗಳನ್ನೂ ಒಳಗೊಂಡಂತೆ ಆಧುನಿಕ ಮಾದರಿಯ ಮಸಾಲೆ ಪಾರ್ಕ್‌ವೊಂದನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ;

(ಇ) ಇದರಿಂದ ಬ್ಯಾಡಗಿ ಮೆಣಸಿನಕಾಯಿ ಖರೀದಿ ಮಾಡುವ ಕಂಪನಿಗಳು ತಮ್ಮ ಮಸಾಲೆ ಉತ್ಪನ್ನಗಳನ್ನು ತಯಾರಿಸುವ ಘಟಕಗಳನ್ನು ಇಲ್ಲಿಯೇ ಸ್ಥಾಪಿಸುವುದರಿಂದ ಸ್ಥಳೀಯ ಜನರಿಗೆ ಉದ್ಯೋಗ ದೊರೆಯುವಂತಾಗುವುದಿಲ್ಲವೇ; ಸರ್ಕಾರ ಗಮನ ಹರಿಸುವುದೇ ?